# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ -145ರ ವಾರ್ಡ್ ಸಭೆಯ ನಡವಳಿ

ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಹೊಂಬೇಗೌಡನಗರ ವಾರ್ಡ್-145 ರಲ್ಲಿ ವಾರ್ಡ್ ಸಭೆಯನ್ನು ಮಾನ್ಯ ಶ್ರೀಮತಿ. ಲಕ್ಷ್ಮೀದೇವಿ ಆರ್. ಉಪ ಆಯುಕ್ತರು ಕಂದಾಯ (ದಕ್ಷಿಣ), ನೋಡಲ್ ಅಧಿಕಾರಿ ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರ ಅಪ್ಪಣೆ ಮೇರೆಗೆ ದಿನಾಂಕ:01/10/2021 ಶುಕ್ರವಾರದಂದು ಮಧ್ಯಾಹ್ನ 3.00 ಗಂಟೆಗೆ ವಾರ್ಡ್ ಕಮಿಟಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ವ್ಯಾಪ್ತಿಯಲ್ಲಿನ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ಸದಸ್ಯರಿಗೆ ಆಹ್ವಾನ ನೀಡಿದ್ದು, ಸಭೆಗೆ ಹಾಜರಾಗಿರುವ ಎಲ್ಲರಿಗೂ ಸ್ವಾಗತ ಕೋರುತ್ತಾ, ವಾರ್ಡ್ ಸಮಿತಿ ಸಭೆಯ ಅಧ್ಯಕ್ಷರಾದ ಸನ್ಮಾನ್ಯ ಶ್ರೀಮತಿ. ಲಕ್ಷ್ಮೀದೇವಿ ರವರ ಅಧ್ಯಕ್ಷತೆಯೊಂದಿಗೆ ಸಭೆಯನ್ನು ನಡೆಸಲಾಯಿತು.

**ಹಾಜರಿದ್ದವರು:-**

1. ಉಪ ಆಯುಕ್ತರು (ದಕ್ಷಿಣ) ಹಾಗೂ ವಾರ್ಡ್ 145ರ ನೋಡಲ್ ಅಧಿಕಾರಿ.
2. ಸಹಾಯಕ ಅಭಿಯಂತರರು ವಾರ್ಡ್-145
3. ಕೆಲಸ ಪರಿವೀಕ್ಷಕರು ವಾರ್ಡ್-145
4. ಕಿರಿಯ ಇಂಜಿನಿಯರ್ (ವಿದ್ಯುತ್)
5. ಕಿರಿಯ ಇಂಜಿನಿಯರ್ (ಬೆಸ್ಕಾಂ)
6. ಪೊಲೀಸ್ ಇಲಾಖೆ ಅಧಿಕಾರಿಗಳು (ಕಾನೂನು ಸುವ್ಯವಸ್ಥೆ) ಆಡುಗೋಡಿ.
7. ವಿಲ್ಸನ್‌ಗಾರ್ಡನ್ ಪೊಲೀಸ್ ಠಾಣೆ ಕಾನೂನು ಸುವ್ಯವಸ್ಥೆ ಮತ್ತು ಸಂಚಾರ ವಾರ್ಡ್ 145
8. ತೋಟಗಾರಿಕೆ ಇಲಾಖೆ, ಬಿಬಿಎಂಪಿ ಅಧಿಕಾರಿಗಳು ವಾರ್ಡ್ 145.
9. ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್-145.
10. ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್-145.
11. ನಾಗರೀಕ ಕಲ್ಯಾಣ ಸಂಘದ ಸದಸ್ಯರು ಮತ್ತು ಸಾರ್ವಜನಿಕರು.

**ಸಭೆಗೆ ಗೈರು ಹಾಜರಾದ ಇಲಾಖೆಗಳು:-**

1. ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಇಲಾಖೆಯ ಅಧಿಕಾರಿಗಳು.

*********

1. ವಾರ್ಡ್ ವ್ಯಾಪ್ತಿಯ ವಿಲ್ಸನ್‌ಗಾರ್ಡನ್ ರಾಣಿಪಾರ್ಕ್‌ನಲ್ಲಿ ವಿಪರೀತ ಸೊಳ್ಳೆಗಳಿದ್ದು, ಓಡಾಡಲು ಆಗುತ್ತಿಲ್ಲವೆಂದು ಸಭೆಯಲ್ಲಿ ದೂರಿದರು-ಹಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ಪ್ರತಿ ದಿನ ಸೊಳ್ಳೆನಾಶಕವನ್ನು ಸಿಂಪಡಿಸುವುದಾಗಿ ಸಭೆಗೆ ತಿಳಿಸಿದರು.



Scanned with CamScanner

2. ವಾರ್ಡ್ ವ್ಯಾಪ್ತಿಯಲ್ಲಿನ ರಸ್ತೆಗಳಲ್ಲಿ ಅನಧಿಕೃತ ವಾಹನಗಳ ಪಾರ್ಕಿಂಗ್ ಹೆಚ್ಚಾಗುತ್ತಿದ್ದು, ಸ್ಥಳೀಯ ನಿವಾಸಿಗಳಿಗೆ ತೀವ್ರ ತರಹದ ತೊಂದರೆಯಾಗುತ್ತಿದ್ದು, ಅನಧಿಕೃತ ವಾಹನಗಳ ಪಾರ್ಕಿಂಗ್ ತೆರವುಗೊಳಿಸಲು ಕೋರಿದರು–ಸಂಚಾರಿ ಪೋಲೀಸ್ ಅಧಿಕಾರಿಗಳು ಮಾತನಾಡಿ ಸಧ್ಯಕ್ಕೆ ವಾಹನಗಳ ಟೋಯಿಂಗ್ ವ್ಯವಸ್ಥೆ ಇಲ್ಲದೆ ಇರುವುದರಿಂದ ಸದರಿ ವಿಷಯದ ಬಗ್ಗೆ ಮೇಲಾಧಿಕಾರಿಗಳ ಗಮನಕ್ಕೆ ತಂದು ಕ್ರಮ ಕೈಗೊಳ್ಳಲಾಗುವುದೆಂದು ಸಭೆಗೆ ತಿಳಿಸಿದರು.

3. ವಾರ್ಡ್ ವ್ಯಾಪ್ತಿಯ ಅನೇಕ ರಸ್ತೆಗಳಲ್ಲಿ ಬೀದಿ ದೀಪಗಳು ಹಾಳಾಗಿದ್ದು, ರಾತ್ರಿ ವೇಳೆಯಲ್ಲಿ ಸಂಚರಿಸಲು ತೊಂದರೆಯಾಗುತ್ತಿದೆ ಹಾಗೂ ಬೀದಿ ದೀಪಗಳಿಗೆ ಟೈಮರ್ ಅಳವಡಿಸಿರುವುದಿಲ್ಲ ಎಂದು ತಿಳಿಸಿದರು–ಈ ವಿಷಯವಾಗಿ ಕಿರಿಯ ಅಭಿಯಂತರರು (ವಿದ್ಯುತ್) ರವರು ಮಾತನಾಡಿ ಬೀದಿ ದೀಪ ನಿರ್ವಹಣೆಯ ಟೆಂಡರ್ ಪ್ರಗತಿಯಲ್ಲಿದ್ದು, ಟೆಂಡರ್ ಆದ ನಂತರ ಎಲ್ಲಾ ಬೀದಿ ದೀಪಗಳ ಬಗ್ಗೆ ಗಮನ ಹರಿಸಲಾಗುವುದೆಂದು ಹಾಗೂ ಪ್ರಸ್ತುತ ಕೆಲವು ಕಡೆ ಹಾಳಾಗಿರುವ ಬೀದಿ ದೀಪಗಳನ್ನು ದುರಸ್ಥಿಪಡಿಸಲು ಕ್ರಮ ಕೈಗೊಳ್ಳಲಾಗುವುದೆಂದು ತಿಳಿಸಿದರು.

4. ವಾರ್ಡ್ ವ್ಯಾಪ್ತಿಯಲ್ಲಿ ಕಸ ತುಂಬುವ ಆಟೋ/ಕಾಂಪ್ಯಾಕ್ಟರ್ ಗಾಡಿಗಳನ್ನು ಎಲ್ಲೆಂದರಲ್ಲಿ ನಿಲ್ಲಿಸುತ್ತಿದ್ದು, ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ ಎಂದು ತಿಳಿಸಿದರು–ಕಸದ ಗಾಡಿಗಳನ್ನು ಹೆಚ್. ಸಿದ್ದಯ್ಯ ರಸ್ತೆಯ ಹಿಂದೂ ರುದ್ರಭೂಮಿಕ ಕಾಂಪೌಂಡ್ ಪಕ್ಕದಲ್ಲಿ ನಿಲ್ಲಿಸಿಕೊಳ್ಳಲು ಸೂಚಿಸಲಾಯಿತು.

ಮೇಲಿನ ಈ ಎಲ್ಲಾ ಚಟುವಟಿಕೆಗಳನ್ನು ಕ್ರಮಬದ್ಧವಾಗಿ ಸಂಬಂಧಪಟ್ಟ ಇಲಾಖಾವಾರು ಸಮನ್ವಯ ಸಾಧಿಸಿಕೊಂಡು ನಿರ್ವಹಿಸಲು ಎಲ್ಲಾ ಸಿಬ್ಬಂಧಿ ವರ್ಗದವರು ಒಂದುಗೂಡಿ ಈ ಕಾರ್ಯದಲ್ಲಿ ಪಾಲ್ಗೊಂಡು ಮಾನ್ಯ ಆಯುಕ್ತರು (ಬಿಬಿಎಂಪಿ) ರವರು ವಹಿಸಿರುವ ಜವಾಬ್ದಾರಿಯನ್ನು ಯಶಸ್ವಿಯಾಗಿ ನಿರ್ವಹಿಸಲು ಎಲ್ಲರೂ ಸಹಕರಿಸಬೇಕೆಂದು ಹೇಳುತ್ತಾ ಸಭೆ ಮುಕ್ತಾಯಗೊಳಿಸಿದರು.

ಕಾರ್ಯದರ್ಶಿ & ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ – 145
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಧ್ಯಕ್ಷರು & ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ – 145
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ



Scanned with CamScanner